ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಭ್ರೂಣ ಹತ್ಯೆಯನ್ನು ತಡೆಯುವಲ್ಲಿ ಇಲಾಖೆಯು ವಿಫಲವಾಗಿರುವ ಕುರಿತು

ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)

14 (42) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ 05 ವರ್ಷಗಳ ಲಿಂಗಾನುಪಾತದ ಅಂಕಿಅಂಶಗಳನ್ನು ನೀಡುವುದು ಮತ್ತು ವರ್ಷದಿಂದ ವರ್ಷಕ್ಕೆ ಕುಸಿಯುತ್ತಿರುವ ಲಿಂಗಾನುಪಾತ ತಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಹೆಣ್ಣು ಭ್ರೂಣಹತ್ಯೆ ಮತ್ತು ಭ್ರೂಣ ಲಿಂಗ ಪತ್ತೆ ಪ್ರಕರಣಗಳಿಗೆ ಸಂಬಂಧಿಸಿದಂತೆ 2015 ರಿಂದ 2018ರವರೆಗಿನ ಇಲಾಖೆಯ ವರದಿಯನುಸಾರ ಗರ್ಭಪಾತ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) 2019ನೇ ಸಾಲಿನ ಪ್ರಕರಣಗಳ ಕುರಿತು ಆರೋಗ್ಯ ಇಲಾಖೆಯು ವರದಿಯನ್ನು ಇದುವರೆವಿಗೂ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಈ) ಕಳೆದ 02 ವರ್ಷಗಳಲ್ಲಿ ಅನಧಿಕೃತ ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು ಅಲ್ಲಿ ನಕಲು ಪ್ರಮಾಣ ಪತ್ರ ಪಡೆದು ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿರುದ್ಧ ಆರೋಗ್ಯಾಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳು ಕ್ರಮ ಜರುಗಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಉ) ಕಾನೂನು ಉಲ್ಲಂಘನೆಯು ಅವ್ಯಾಹತವಾಗಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲವೇ ಇದಕ್ಕೆ ಕಡಿವಾಣ ಹಾಕುವಲ್ಲಿ ಸರ್ಕಾರವು ವಿಫಲವಾಗಿದೆಯೇ ?